# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಡಗು-ಮಡಿಕೇರಿ

## SC No. 84/2024

| | | | |
|---|---|---|---|
| ಸಾಕ್ಷಿದಾರರ ಹೆಸರು | : | **ಶ್ರೀ ಶಿವಾನಂದ ಹೆಚ್.ಬಿ** | **PW – 4** |
| ತಂದೆಯ ಹೆಸರು | : | **ವೀರಭದ್ರಪ್ಪ ಹೆಚ್.ಬಿ** | **CW – 5** |
| ವಯಸ್ಸು | : | **44 ವರ್ಷ** | |
| ವೃತ್ತಿ | : | **ಕೂಲಿ ಕೆಲಸ** | |
| ವಾಸ | : | **ಕಾರೆಗೊಪ್ಪ ಗ್ರಾಮ, ಸೋಮವಾರಪೇಟೆ ತಾಲೂಕು** | |

**ಸಾಕ್ಷಿಯನ್ನು ದಿನಾಂಕ 07-03-2026 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**<u>ಮುಖ್ಯ ವಿಚಾರಣೆ: ಸರ್ಕಾರಿ ಅಭಿಯೋಜಕರಿಂದಃ</u>**

1. ನನಗೆ ನಂದೀಶನ ಪರಿಚಯ ಇರುತ್ತದೆ. ಆರೋಪಿತರ ಪರಿಚಯ ಇರುತ್ತದೆ. ನಂದೀಶ್ ಈತನಿಗೆ ಗಾಯ ಆಗಿದ್ದ ಬಗ್ಗೆ ನಾನು ನೋಡಿರುವುದಿಲ್ಲ. ಗಾಯಾಳುವಿಗೆ ನಾನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುವುದಿಲ್ಲ. ಆ ಬಗ್ಗೆ ಪೊಲೀಸರಿಗೆ ಹೇಳಿಕೆ ಕೊಟ್ಟಿರುವುದಿಲ್ಲ.

**(ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲು- ಸರ್ಕಾರಿ ಅಭಿಯೋಜಕರಿಂದಃ</u>**

1. ದಿನಾಂಕ 31.10.2023 ರಂದು ಮಧ್ಯಾಹ್ನ 1.40 ಗಂಟೆಗೆ ನಾನು ನಮ್ಮ

ಮನೆ ಬಳಿ ಬಂದಿರುವಾಗ ಚಾಸಾ–1 ರವರು ನಮ್ಮ ಮನೆ ರಸ್ತೆಯಿಂದ ಓಡಿಬರುತ್ತಿದ್ದು, ಅವರು ನನಗೆ ಸಿಕ್ಕಿ ಹೇಳಲಾಗಿ ಚೌಡಿ ಹಬ್ಬ ಪೂಜೆ ಸಮಯದಲ್ಲಿ ಆರೋಪಿತರು ಊಟ ಬಡಿಸುವ ವಿಚಾರದಲ್ಲಿ ನನ್ನೊಂದಿಗೆ ಜಗಳ ತೆಗೆದು ಅವಾಚ್ಯವಾಗಿ ಬೈದು, ಬೀರ್ ಬಾಟಲಿನಿಂದ ತನಗೆ ಹೊಟ್ಟೆಯ ಮೇಲೆ ಹಲ್ಲೆ ಮಾಡಿದರು ಎಂದು ನನಗೆ ತಿಳಿಸಿದನು ಎಂದು ಸೂಚಿಸುವುದು ಸರಿಯಲ್ಲ. ನಂತರ ನಾನು ಗಾಯಾಳುವಿಗೆ ಪೊಲೀಸ್ ಠಾಣೆಗೆ ಕರೆದುಕೊಂಡು ಹೋಗಿದ್ದೆ ಎಂದು ಸೂಚಿಸುವುದು ಸರಿಯಲ್ಲ. ಆ ಬಗ್ಗೆ ಪೊಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ. ಹೇಳಿಕೆಯನ್ನು **ನಿಪಿ–4** ಎಂದು ಗುರುತಿಸಲಾಯಿತು.

**ಪಾಟೀ ಸವಾಲು– 1 ರಿಂದ 3 ನೇ ಆರೋಪಿತರ ಪರ ವಕೀಲರಾದ ಶ್ರೀ. ಕೆ.ಎ.ಕೆ.ಆರ್ ರವರಿಂದಃ**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ** ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/–

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೊಡಗು–ಮಡಿಕೇರಿ.